## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** :- ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಜಿ.ಎಸ್.ಟಿ.(ಸರಕು ಮತ್ತು ಸೇವಾ ತೆರಿಗೆ) ಕೋಶ ಸಮಿತಿಯನ್ನು ರಚಿಸಲು ಆದೇಶವನ್ನು ಹೊರಡಿಸುವ ಬಗ್ಗೆ.

**ಓದಲಾಗಿದೆ.**

1) ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರದ ಸಂಖ್ಯೆ: D.O.No. D-15001/6/2017-GA, ದಿನಾಂಕ: 06.07.2017

2) ಟಿಪ್ಪಣಿ ಕಂಡಿಕೆ ಸಂ: (3) ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರು ಅನುಮೋದಿಸಿದಂತೆ.

*******

**ಪ್ರಸ್ತಾವನೆ:**

ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ರವರು ಮೇಲೆ ಓದಲಾದ ಕ್ರಮ ಸಂ. (1) ರ ದಿನಾಂಕ: 06.07.2017 ರ ಅರೆ ಸರ್ಕಾರಿ ಪತ್ರ ಜೊತೆ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಟಿಪ್ಪಣಿ ಕಂಡಿಕೆ ಸಂ.(3) ಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಕೋಶವನ್ನು ರಚಿಸಲು ಅನುಮೋದಿಸಿರುತ್ತಾರೆ.

ಮೇಲೆ ಓದಲಾದ (1)ರ ಪತ್ರದಲ್ಲಿ ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ ಇವರು ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಯ ಬಗ್ಗೆ ಗ್ರಾಮೀಣ ಪ್ರದೇಶದ ಜನರಿಗೆ, ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಜಾಗೃತಿ ಮೂಡಿಸಲು, ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಕೋಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಲ್ಲಿ ಒಬ್ಬ ಹಿರಿಯ ನೋಡಲ್ ಅಧಿಕಾರಿಯ ನೇತೃತ್ವದಲ್ಲಿ ರಚಿಸಲು ತಿಳಿಸಿರುತ್ತಾರೆ. ಅದರಂತೆ ಮೇಲೆ ಓದಲಾದ (2) ರ ಟಿಪ್ಪಣಿ ಕಂಡಿಕೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆಂತರಿಕ ಆರ್ಥಿಕ ಸಲಹೆಗಾರರನ್ನು ನೋಡಲ್ ಅಧಿಕಾರಿಯನ್ನಾಗಿ ಮಾಡಿ, ಸದರಿಯವರ ನೇತೃತ್ವದಲ್ಲಿ ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಕೋಶವನ್ನು ರಚಿಸಲು ಹಾಗೂ ಮುಖ್ಯ ಆರ್ಥಿಕ ಸಲಹೆಗಾರರು, ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆ. ಮುಖ್ಯ ಲೆಕ್ಕಾಧಿಕಾರಿಗಳು, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು. ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಹಾಗೂ ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ರವರನ್ನು ಒಳಗೊಂಡಂತೆ ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಕೋಶದ ಸಮಿತಿಯನ್ನು ರಚಿಸಲು ಅನುಮೋದಿಸಿರುತ್ತಾರೆ.

ಮುಂದುವರೆದು, ಸದರಿ ನೋಡಲ್ ಅಧಿಕಾರಿಗಳು ರಾಜ್ಯದ ಹಣಕಾಸು, ಕಂದಾಯ ಮತ್ತು ವಾಣಿಜ್ಯ ತೆರಿಗೆ ಇಲಾಖೆಯ ನುರಿತ ಅಧಿಕಾರಿಗಳೊಂದಿಗೆ (ಅ) ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಬಗ್ಗೆ ಜಾಗೃತಿ ಮೂಡಿಸಲು ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವೀಡಿಯೋ ಕಾನ್ಫರೆನ್ಸ್‌ನ್ನು ನಡೆಸುವುದು. (ಆ) ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಬಗ್ಗೆ ಸ್ಯಾಟ್‌ಕಾಮ್ ಮೂಲಕ ಎಲ್ಲಾ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಗಳ ಅಧಿಕಾರಿ, ಸಿಬ್ಬಂದಿಗಳಿಗೆ ಮತ್ತು ಚುನಾಯಿತ ಪ್ರತಿನಿಧಿಗಳಿಗೆ ಜಾಗೃತಿ ಮೂಡಿಸುವುದು, (ಇ) ಜಿ.ಎಸ್.ಟಿ. ಬಗ್ಗೆ ಪ್ರಶ್ನೆಗಳು ಹಾಗೂ ಸಮಸ್ಯೆಗಳು ಇದ್ದಲ್ಲಿ ಜಿ.ಎಸ್.ಟಿ.ಕೋಶದಲ್ಲಿ ಒಂದು feedback wing ಮತ್ತು ಸಹಾಯವಾಣಿ ಕೇಂದ್ರ (Helpdesk) ವನ್ನು ಸೃಜಿಸುವುದು ಹಾಗೂ (ಈ) ಸದರಿ ವಿಷಯದ ಕುರಿತು ವಾರಾಂತ್ಯ ವರದಿಯನ್ನು ಇ-ಆಡಳಿತ ಶಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ MoPR ಗೆ ಕಳುಹಿಸ ಬಹುದಾಗಿದೆ.

**ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ/32/ಗ,ಕೋಶ/2017-18, ಬೆಂಗಳೂರು, ದಿನಾಂಕ: 22.07.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ರಾಜ್ಯ ಮಟ್ಟದ **"ಜಿ.ಎಸ್.ಟಿ" (ಸರಕು ಮತ್ತು ಸೇವಾ ತೆರಿಗೆ)** ಕೋಶ ಸಮಿತಿಯನ್ನು ರಚಸಿಲು ಅನುಮೋದನೆ ನೀಡಿ ಆದೇಶಿಸಿದೆ.

**ಜಿ.ಎಸ್.ಟಿ (ಸರಕು ಮತ್ತು ಸೇವಾ ತೆರಿಗೆ) ಕೋಶ ಸಮಿತಿಯ ವಿವರಗಳು:**

| ಕ್ರಮ ಸಂಖ್ಯೆ | ಹುದ್ದೆ ಹಾಗೂ ಶಾಖೆ | ಸಮಿತಿಯ ಸ್ಥಾನ |
|---|---|---|
| 01. | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ | ನೋಡಲ್ ಅಧಿಕಾರಿ |
| 02. | ಮುಖ್ಯ ಆರ್ಥಿಕ ಸಲಹೆಗಾರರು, ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆ. | ಸದಸ್ಯರು |
| 03 | ಮುಖ್ಯ ಲೆಕ್ಕಾಧಿಕಾರಿಗಳು, ಪಂ.ರಾಜ್ ಇಂಜಿನಿಯರಿಂಗ್ ವಿಭಾಗ. | ಸದಸ್ಯರು |
| 04 | ಮುಖ್ಯ ಲೆಕ್ಕಾಧಿಕಾರಿಗಳು, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು. | ಸದಸ್ಯರು |
| 05 | ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ | ಸದಸ್ಯರು |
| 06 | ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ | ಸದಸ್ಯರು |

**ಜಿ.ಎಸ್.ಟಿ (ಸರಕು ಮತ್ತು ಸೇವಾ ತೆರಿಗೆ) ಕೋಶ ಸಮಿತಿಯ ಜವಾಬ್ದಾರಿಗಳು:**

1. ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಬಗ್ಗೆ ಜಾಗೃತಿ ಮೂಡಿಸಲು ನೋಡಲ್ ಅಧಿಕಾರಿಗಳು ರಾಜ್ಯದ ಹಣಕಾಸು, ಕಂದಾಯ ಮತ್ತು ವಾಣಿಜ್ಯ ತೆರಿಗೆ ಇಲಾಖೆಯ ನುರಿತ ಅಧಿಕಾರಿಗಳೊಂದಿಗೆ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವೀಡಿಯೋ ಕಾನ್ಫರೆನ್ಸ್‌ನ್ನು ನಡೆಸಬಹುದಾಗಿದೆ.
2. ಜಿ.ಎಸ್.ಟಿ. (ಸರಕು ಮತ್ತು ಸೇವಾ ತೆರಿಗೆ) ಬಗ್ಗೆ ಸ್ಯಾಟ್‌ಕಾಮ್ ಮೂಲಕ ಎಲ್ಲಾ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಗಳ ಅಧಿಕಾರಿ, ಸಿಬ್ಬಂದಿಗಳಿಗೆ ಮತ್ತು ಚುನಾಯಿತ ಪ್ರತಿನಿಧಿಗಳಿಗೆ ಜಾಗೃತಿ ಮೂಡಿಸುವುದು.
3. ಜಿ.ಎಸ್.ಟಿ. ಬಗ್ಗೆ ಪ್ರಶ್ನೆಗಳು ಹಾಗೂ ಸಮಸ್ಯೆಗಳು ಇದ್ದಲ್ಲಿ ಜಿ.ಎಸ್.ಟಿ.ಕೋಶದಲ್ಲಿ ಒಂದು feedback wing ಮತ್ತು ಸಹಾಯವಾಣಿ ಕೇಂದ್ರ (Helpdesk) ವನ್ನು ಸೃಜಿಸಿ, ಅನುಷ್ಠಾನಗೊಳಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಂದ**
**ಅನುಮೋದಿಸಲ್ಪಟ್ಟಿದೆ.**

22/7/17
(ಕೆ.ಯಾಲಕ್ಕಿಗೌಡ)
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

(1) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
(2) ಮುಖ್ಯ ಆರ್ಥಿಕ ಸಲಹೆಗಾರರು, ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆ.
(3) ಮುಖ್ಯ ಲೆಕ್ಕಾಧಿಕಾರಿಗಳು, ಪಂ.ರಾಜ್ ಇಂಜಿನಿಯರಿಂಗ್ ವಿಭಾಗ.
(4) ಮುಖ್ಯ ಲೆಕ್ಕಾಧಿಕಾರಿಗಳು, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು.
(5) ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ

(6) ಆರ್ಥಿಕ ನಿಯಂತ್ರಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾಅಪ ಇಲಾಖೆ, ಬೆಂಗಳೂರು.
2. ಆಯುಕ್ತರು, ಮ.ಗಾಂ.ರಾ.ಗ್ರಾ.ಉ.ಖಾ. ಯೋಜನೆ.
3. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
4. ಹೆಚ್ಚುವರಿ ನಿರ್ದೇಶಕರು, ನಿರ್ಮಲ ಭಾರತ ಅಭಿಯಾನ, ಕಾವೇರಿ ಭವನ, ಬೆಂಗಳೂರು.
5. ಅಭಿಯಾನ ನಿರ್ದೇಶಕರು, ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL).
7. ಮುಖ್ಯ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
8. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ರೂರಲ್ ಡೆವಲಪ್‌ಮೆಂಟ್ ಏಜೆನ್ಸಿ (KRRDA).
9. ಮುಖ್ಯಸ್ಥರು, ಗ್ರಾಮ ಸ್ವರಾಜ್, ಎಂಎಸ್ ಐ ಎಲ್ ಕಟ್ಟಡ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
10. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯ್‌ಗಳ ಉಪಕಾರ್ಯದರ್ಶಿಗಳು/ಮುಖ್ಯ ಲೆಕ್ಕಾಧಿಕಾರಿಗಳು/ಮುಖ್ಯ ಯೋಜನಾಧಿಕಾರಿ/ ಯೋಜನಾ ನಿರ್ದೇಶಕರುಗಳು.
12. ಎಲ್ಲಾ ನಿರ್ದೇಶಕರುಗಳು, ಗ್ರಾಅಪ ಇಲಾಖೆ.
13. ನಿರ್ದೇಶಕರು, ANSSIRD & PR, ಮೈಸೂರು.
14. ಜಂಟಿ ಕಾರ್ಯದರ್ಶಿಗಳು (ಪ್ರ) (ಆಡಳಿತ), ಗ್ರಾಅಪ.
15. ಉಪ ಕಾರ್ಯದರ್ಶಿಗಳು (ಆಡಳಿತ), ಗ್ರಾಅಪ.